# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವಾರ್ಡ್ ನಂ.174 ಹೆಚ್.ಎಸ್.ಆರ್ ಬಡಾವಣೆ ವಾರ್ಡ್ ಸಮಿತಿ ಸಭೆಯ ನಡುವಳಿಗಳು

ಮಾನ್ಯ ನೋಡಲ್ ಅಧಿಕಾರಿ/ಜಂಟಿ ಆಯುಕ್ತರು (ಮಹದೇವಪುರ) ರವರು ದಿನಾಂಕ: 02.01.2021 ರಂದು ಬೆಳಿಗ್ಗೆ 11.00 ಘಂಟೆಗೆ ವಾರ್ಡ್ ಸಮಿತಿ ಸಭೆಯನ್ನು ವಾರ್ಡ್ ನಂ.174 ಹೆಚ್.ಎಸ್.ಆರ್ ಕಛೇರಿಯಲ್ಲಿ ನಡೆಸಿದ್ದು, ಸಭೆಯ ನಡವಳಿ ಈ ಕೆಳಕಂಡಂತಿರುತ್ತದೆ.

**ಉಪಸ್ಥಿತರು:**

| | ಅಧಿಕಾರಿ ಮತ್ತು ಸಿಬ್ಬಂದಿ ವರ್ಗದವರು |
|---|---|
| 1. | ಶ್ರೀ ಆರ್. ವೆಂಕಟಚಾಲಪತಿ ಕ.ಆ.ಸೇ, ನೋಡಲ್ ಅಧಿಕಾರಿ ವಾ.ನಂ.174 ಹಾಗೂ ಜಂಟಿ ಆಯುಕ್ತರು (ಮಹದೇವಪುರ) ವಲಯ |
| 2. | ಶ್ರೀ ರವಿ.ಡಿ ಕಾರ್ಯದರ್ಶಿ, ಸಹಾಯಕ ಅಭಿಯಂತರರು |
| 3. | ಶ್ರೀಮತಿ ಲಕ್ಷ್ಮಿ.ಬಿ, ಸಹಾಯಕ ಕಂದಾಯ ಅಧಿಕಾರಿ ಹೆಚ್.ಎಸ್.ಆರ್ ಬಡಾವಣೆ |
| 4. | ಶ್ರೀ ಸಾಯಿಬಣ್ಣ ಸಹಾಯಕ ಅಭಿಯಂತರರು (ಬಿಡಬ್ಲ್ಯುಎಸ್ಎಸ್‌ಬಿ) |
| 5. | ಶ್ರೀ ವಿನೋದ್, ಹಿರಿಯ ಆರೋಗ್ಯ ಪರಿವೀಕ್ಷಕರು |
| 6. | ಶ್ರೀಮತಿ ಸತ್ಯವಾಣಿ, ಕಿರಿಯ ಆರೋಗ್ಯ ಪರಿವೀಕ್ಷಕರು |
| 7. | ಶ್ರೀ ಹೆಚ್.ಇ. ಚಂದ್ರಶೇಖರ ಆರ್.ಡಬ್ಲ್ಯು.ಎ |

ಮಾನ್ಯ ನೋಡಲ್ ಅಧಿಕಾರಿ/ಜಂಟಿ ಆಯುಕ್ತರು (ಮಹದೇವಪುರ) ರವರ ಸಮ್ಮುಖದಲ್ಲಿ ಸಭೆಗೆ ಹಾಜರಾದ ಎಲ್ಲಾ ಇಲಾಖೆಯ ಅಧಿಕಾರಿ/ಸಿಬ್ಬಂದಿ ಹಾಗೂ ಸಂಘ ಸಂಸ್ಥೆಗಳ ಪದಾಧಿಕಾರಿಗಳಿಗೆ ಮತ್ತು ಸಾರ್ವಜನಿಕರಿಗೆ ಹೊಸ ವರ್ಷದ ಶುಭಾಷಯಗಳು ಕೋರುತ್ತಾ,ಸಭೆಯನ್ನು ಪ್ರಾರಂಭಿಸಲಾಯಿತು.

ಕೋವಿಡ್-19 ಯೂರೋಪ್ ದೇಶದಲ್ಲಿ ರೂಪಾಂತರ ಕರೋನಾ ಉಲ್ಬಣಗೊಂಡು ಈಗಾಗಲೇ ಭಾರತಕ್ಕೆ ಹಿಂದಿರುಗುತ್ತಿರುವ ಜನರಿಂದ ದೇಶದ್ಯಾಂತ ಹರಡುವ ಸಾಧ್ಯತೆಗಳಿರುವುದಿಂದ ಸರ್ಕಾರದ ಮಾರ್ಗ ಸೂಚಿಯಂತೆ ಮುನ್ನೆಚರಿಕೆ ಕ್ರಮ ಕೈಗೊಳ್ಳಲು ನೋಡಲ್ ಅಧಿಕಾರಿಗಳು ತಿಳಿಸಿದರು.

Scanned with Car

| ಕ್ರ.ಸಂ | ಇಲಾಖೆ | ವಿಷಯ |
|---|---|---|
| 1 | ಘನತ್ಯಾಜ್ಯ ನಿರ್ವಹಣೆ | ಹಿಂದಿನ ಸಭೆಯಲ್ಲಿ ಚರ್ಚಿಸಿರುವ ವಿಷಯಗಳ ಬಗ್ಗೆ ಪ್ರಸ್ತಾಪಿಸಲಾಗಿದ್ದು, ಕ್ರಮ ವಹಿಸಲಾಗುತ್ತಿದೆ ಎಂದು ಹಿರಿಯ ಆರೋಗ್ಯ ಪರಿವೀಕ್ಷಕರು ತಿಳಿಸಿರುತ್ತಾರೆ.<br><br>**ಕ್ರಮ : ಕಿರಿಯ ಆರೋಗ್ಯ ಪರಿವೀಕ್ಷಕರು** |
| 2 | ಬಿ.ಡಬ್ಲ್ಯೂ.ಎಸ್.ಎಸ್.ಬಿ | ಹೆಚ್.ಎಸ್.ಆರ್ ಬಡಾವಣೆಯಲ್ಲಿ ಬಿ.ಡಬ್ಲ್ಯೂ.ಎಸ್.ಎಸ್.ಬಿ ವತಯಿಂದ ಪೈಪ್ ಲೈನ್ಸ್ ಅಳವಡಿಸುತ್ತಿದ್ದು, ಹಾಗೂ ಪೂರ್ಣಗೊಂಡ ಕಾಮಗಾರಿಯನ್ನು ವೆಟ್‌ಮಿಕ್ಸ್ ಹಾಕಲು ಸದಸ್ಯರು ಕೋರಿರುತ್ತಾರೆ. ಈ ಬಗ್ಗೆ ಕ್ರಮ ವಹಿಸಲು ಅಧ್ಯಕ್ಷರು ಸೂಚಿಸಿರುತ್ತಾರೆ.<br>**ಕ್ರಮ: ಸಹಾಯಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ** |
| 3 | ಕಾಮಗಾರಿ ಇಲಾಖೆ | ಹಿಂದಿನ ಸಭೆಯಲ್ಲಿ ಚರ್ಚಿಸಿರುವ ವಿಷಯಗಳ ಬಗ್ಗೆ ಪ್ರಸ್ತಾಪಿಸಲಾಗಿದ್ದು, ಕ್ರಮವಹಿಸಲಾಗಿದೆ ಎಂದು ಸಹಾಯಕ ಅಭಿಯಂತರರು ತಿಳಿಸಿರುತ್ತಾರೆ.<br>• ವಾರ್ಡ್ ವ್ಯಾಪ್ತಿಯಲ್ಲಿ ಗೇಲ್ ಗ್ಯಾಸ್ ಸಂಸ್ಥೆ ರವರು ಹೊಸದಾಗಿ ಡಾಂಬರೀಕರಣಗೊಂಡಿರುವ ರಸ್ತೆಯನ್ನು ಅಗೆದಿರುತ್ತಾರೆ ಎಂದು ಸದಸ್ಯರು ಸಭೆಯಲ್ಲಿ ತಿಳಿಸಿರುತ್ತಾರೆ.<br>ಈ ಬಗ್ಗೆ ಕ್ರಮ ವಹಿಸುವಂತೆ ಅಧ್ಯಕ್ಷರು ಸಂಬಂಧಪಟ್ಟ ಅಭಿಯಂತರರಿಗೆ ಸೂಚಿಸಿರುತ್ತಾರೆ.<br>**ಕ್ರಮ : ಸಹಾಯಕ ಅಭಿಯಂತರರು,** |
| | | |

ಅಂತಿಮವಾಗಿ ಮಾನ್ಯ ನೋಡಲ್ ಅಧಿಕಾರಿಗಳು, ವಾರ್ಡ್ ನಂ. 174 ಹಾಗೂ ಜಂಟಿ ಆಯುಕ್ತರು (ಮಹಾದೇವಪುರ) ವಲಯ ರವರು ಸಭೆಯಲ್ಲಿ ಚರ್ಚಿಸಲಾದ ಎಲ್ಲಾ ವಿಷಯಗಳ ಬಗ್ಗೆ ಸಂಬಂಧಪಟ್ಟ ಇಲಾಖೆಯ ಅಧಿಕಾರಿಗಳು ತುರ್ತು ಕ್ರಮವಹಿಸಲು ಸೂಚಿಸಿದರು ಹಾಗೂ ಸಾರ್ವಜನಿಕರು ನೀಡಿರುವ ದೂರಿನ ಬಗ್ಗೆ ಅಗತ್ಯ ಕ್ರಮವಹಿಸುವುದಾಗಿ ತಿಳಿಸುತ್ತಾ ಸಭೆಯಲ್ಲಿ ಹಾಜರಿದ್ದ ಎಲ್ಲಾರಿಗೂ ವಂದನೆಗಳನ್ನು ಸಲ್ಲಿಸುವುದರ ಮೂಲಕ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಕಾರ್ಯದರ್ಶಿ
ಸಹಾಯಕ ಅಭಿಯಂತರು
ಹೆಚ್.ಎಸ್.ಆರ್.ಬಡಾವಣೆ
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ನೋಡಲ್ ಅಧಿಕಾರಿ ವಾರ್ಡ್ ನಂ.174
ಹೆಚ್.ಎಸ್.ಆರ್.ಬಡಾವಣೆ ಹಾಗೂ
ಜಂಟಿ ಆಯುಕ್ತರು ಮಹದೇವಪುರ ವಲಯ
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

Scanned with Car